ದಿನಾಂಕ: 16.02.2022 ರಂದು ಬೆಳಗ್ಗೆ 10.30 ಗಂಟೆಗೆ ರಾಜಾಜಿನಗರ ವಾರ್ಡ್ ನಂ. 99 ರಲ್ಲಿ ಶ್ರೀ ಹೆಚ್.ವಿ. ಅಶ್ವತ್ಥ್, ನೋಡಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡುವಳಿಗಳ ವಿವರ:-

**ಹಾಜರಿದ್ದ ಪಾಲಿಕೆಯ ಅಧಿಕಾರಿಗಳು ಹಾಗೂ ವಾರ್ಡ್ ಕಮಿಟಿ ಸದಸ್ಯರು:-**

10. ಶ್ರೀ ಹೆಚ್.ವಿ. ಅಶ್ವತ್ಥ್, ನೋಡಲ್ ಅಧಿಕಾರಿಗಳು
11. ಶ್ರೀ ಸುಭಾಸ್ ಪಾಟೀಲ್, ಸಹಾಯಕ ಅಭಿಯಂತರರು, ವಾರ್ಡ್ ನಂ. 99
12. ಶ್ರೀ ಜಿ.ಸಿ. ಲೋಕೇಶ್ ಅಸೆಸರ್
13. ಶ್ರೀಮತಿ ದಿವ್ಯಾ, ಹಿರಿಯ ಆರೋಗ್ಯ ಪರಿವೀಕ್ಷಕರು
14. ಶ್ರೀಮತಿ ಡಾ: ರೂಪಾಶ್ರೀ, ವೈದ್ಯಾಧಿಕಾರಿ
15. ಶ್ರೀ ರಘು, ಕಿರಿಯ ಆರೋಗ್ಯ ಪರಿವೀಕ್ಷಕರು
16. ಶ್ರೀ ಶರಣ ಬಸವ, ಮಾರ್ಷಲ್
17. ಶ್ರೀ ಶಿವರಾಮಯ್ಯ, ಸಹಾಯಕ ಸಂಚಾರಿ ನಿರೀಕ್ಷಕರು
18. ಶ್ರೀ ರಾಜಣ್ಣ , ಸದಸ್ಯರು
19. ಶ್ರೀ ಉಮೇಶ್, ಸದಸ್ಯರು
20. ಶ್ರೀ ಆನಂದ್
21. ಶ್ರೀ ಸುರೇಶ್ ಗಡಗೋಳಿ,
22. ಶ್ರೀ ನಾಗರಾಜ್, ಸದಸ್ಯರು,
23. ಶ್ರೀಮತಿ ನಿರ್ಮಲಾ ಶೇಖರ್.ಸಿ.ಪಿ.ಪಿ. ಮೆಂಬರ್

ದಿನಾಂಕ: 16.02.2022 ರಂದು ಬೆಳಗ್ಗೆ 10.30 ಗಂಟೆಗೆ ವಾರ್ಡ್ ನಂ. 99 ರಾಜಾಜಿನಗರದ ಡಾ: ಅಬ್ದುಲ್ ಕಲಾಂ, ಸಭಾಂಗಣದಲ್ಲಿ ಪಾಲಿಕೆ ಅಧಿಕಾರಿಗಳೊಂದಿಗೆ ಸಭೆಯನ್ನು ಕೈಗೊಂಡು ಈ ಕೆಳಗಿನ ವಿಷಯಗಳನ್ನು ಚರ್ಚಿಸಲಾಯಿತು.

1. ವಾರ್ಡ್ ಸದಸ್ಯರು ಕೋವಿಡ್-19 ಓಮಿಕ್ರಾನ್ ಬಗ್ಗೆ ಸಭೆಯಲ್ಲಿ ಚರ್ಚಿಸಿದರು. ಇದಕ್ಕೆ ಉತ್ತರವಾಗಿ ನೋಡಲ್ ಅಧಿಕಾರಿಗಳು ಈಗಾಗಲೇ ಸಾಕಷ್ಟು ವ್ಯಾಕ್ಸಿನೇಷನ್ ನೀಡಲಾಗಿದ್ದು, ಸಾರ್ವಜನಿಕರಲ್ಲಿ ಅರಿವು ಮೂಡಿಸುವಂತೆ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ಸೂಚಿಸಿದರು.

2. ವಾರ್ಡ್ ವ್ಯಾಪ್ತಿಯಲ್ಲಿ ಆರ್.ಓ. ಪ್ಲಾಂಟ್‌ಗಳು ಕಾರ್ಯ ನಿರ್ವಹಿಸದೆ ಇರುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು. ಇದಕ್ಕೆ ಉತ್ತರವಾಗಿ ನೋಡಲ್ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳುವಂತೆ ವಾರ್ಡಿನ ಅಭಿಯಂತರರಿಗೆ ಸೂಚಿಸಿದರು.

3. ವಾರ್ಡ್ ವ್ಯಾಪ್ತಿಯಲ್ಲಿ ಬರುವ ರಸ್ತೆಯಲ್ಲಿ ಹಳೇಯ ವಾಹನಗಳು ನಿಂತಿರುವ ಬಗ್ಗೆ ಸಭೆಯಲ್ಲಿ ಚರ್ಚಿಸಿದರು. ಇದಕ್ಕೆ ಉತ್ತರವಾಗಿ ವಾರ್ಡಿನ ಅಭಿಯಂತರರು ಸರ್ಕಾರದಿಂದ ಈಗಾಗಲೇ ಆದೇಶ ಹೊರಡಿಸಿದ್ದು, ವಾಹನ ಮಾಲೀಕರಿಗೆ ನೋಟಿಸ್ ನೀಡಿ ಅವುಗಳನ್ನು ತೆರವುಗೊಳಿಸುವ ಬಗ್ಗೆ ಕ್ರಮ ಕೈಗೊಳ್ಳುವುದಾಗಿ ಸಭೆಯಲ್ಲಿ ತಿಳಿಸಿದರು.
4. ನೋಡಲ್ ಅಧಿಕಾರಿಗಳು ಆರೋಗ್ಯಾಧಿಕಾರಿಗಳ ಜೊತೆ ಕೋವಿಡ್ 3ನೇ ಅಲೆಯ ಬಗ್ಗೆ ಚರ್ಚಿಸಿದರು. ಹಾಗೂ 3ನೇ ಅಲೆಯ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸುವಂತೆ ಸಭೆಯಲ್ಲಿ ತಿಳಿಸಿದರು. ಇದಕ್ಕೆ ಉತ್ತರವಾಗಿ ಈಗಾಗಲೇ ಸಾರ್ವಜನಿರಿಗೆ ಅರಿವು ಮೂಡಿಸಲಾಗುತ್ತಿರುತ್ತದೆ. ಹಾಗೀ ಕೋವಿಡ್ ವ್ಯಾಕ್ಸಿನೇಷನ್ ಶೇ. 98% ಆಗಿದೆ ಎಂದು ಸಭೆಗೆ ತಿಳಿಸಿದರು.
5. ಸದಸ್ಯರಾದ ಶ್ರೀ ಶ್ರೀನಿವಾಸ್ ಮತ್ತು ಇತರರು ಡಾ: ರಾಜ್ ಕುಮಾರ್ ಕಲಾಕ್ಷೇತ್ರದ ಕಡತವನ್ನು ಸಭೆಗೆ ಹಾಜರು ಪಡಿಸುವಂತೆ ತಿಳಿಸಿದರು. ಇದಕ್ಕೆ ಉತ್ತರವಾಗಿ ವಾರ್ಡಿನ ಅಭಿಯಂತರರು ಹಿರಿಯ ಅಧಿಕಾರಿಗಳ ಜೊತೆ ಚರ್ಚಿಸಿ, ಮುಂದಿನ ಸಭೆಯಲ್ಲಿ ಹಾಜರು ಪಡಿಸಲಾಗುವುದು.
6. ಮಾರ್ಷಲ್‌ಗಳಿಗೆ ಸಾರ್ವಜನಿಕ ಸ್ಥಳಗಳಲ್ಲಿ ಕಸ ಹಾಕಿದವರ ಮೇಲೆ ದಂಡ ವಿಧಿಸುವಂತೆ ಸೂಚಿಸಿದರು.
7. ಬೆಸ್ಕಾಂ ಟಿ.ಸಿ. ಸುತ್ತಲು ಗುಂಡಿಗಳನ್ನು ಮುಚ್ಚಿಸಲು ಹಾಗೂ ಕಸ ಹಾಕುವುದನ್ನು ತಪ್ಪಿಸುವಂತೆ ಸಭೆಯಲ್ಲಿ ಚರ್ಚಿಸಲಾಯಿತು. ಇದಕ್ಕೆ ಉತ್ತರವಾಗಿ ನೋಡಲ್ ಅಧಿಕಾರಿಗಳು ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

Scanned by CamScanner

8. ಬಸವೇಶ್ವರನಗರ ಕಾಲೇಜ್ ರಸ್ತೆಯಲ್ಲಿರುವ ಚರಂಡಿಯಲ್ಲಿ ಹೂಳು ತುಂಬಿದ್ದು, ಮಳೆ ನೀರು ಸರಾಗವಾಗಿ ಹರಿಯದೆ, ರಸ್ತೆಯಲ್ಲಿ ಬರುತ್ತಿದ್ದು, ಅದನ್ನು ಸರಿಪಡಿಸುವಂತೆ ಚರ್ಚಿಸಲಾಯಿತು. ಇದಕ್ಕೆ ಉತ್ತರವಾಗಿ ವಾರ್ಡ್ ಅಭಿಯಂತರರು ಕ್ರಮ ಕೈಗೊಳುವಂತೆ ತಿಳಿಸಿದರು.
9. ವಾರ್ಡ್ ನಂ. 99ರ ವ್ಯಾಪ್ತಿಯಲ್ಲಿ ಸಿಲ್ಟ್ ಅಂಡ್ ಟ್ರಾಕ್ಟರ್ ಕಾಮಗಾರಿ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು. ಸದರಿ ಕಾಮಗಾರಿಯು ದಿನನಿತ್ಯ ಸುಲಲಿತವಾಗಿ ನಡೆಯುತ್ತಿರುವ ಬಗ್ಗೆ ನೋಡಲ್ ಅಧಿಕಾರಿಗಳು ವಾರ್ಡ್ ಸದಸ್ಯರಿಗೆ ಕೇಳಿದರು.

ಸದಸ್ಯ ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದ ಮಾನ್ಯ ಅಧ್ಯಕ್ಷರಿಗೆ ವಾರ್ಡ್ ಸಮಿತಿ ಸದಸ್ಯರುಗಳಿಗೆ ಮತ್ತು ವಿವಿಧ ಇಲಾಖೆಯ ಅಧಿಕಾರಿಗಳಿಗೆ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ವಾರ್ಡ್ ಸಮಿತಿ
ವಾರ್ಡ್ ನಂ. 99

Scanned by CamScanner